# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 274

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.09.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಇಲ್ಲಿಯವರೆಗೆ ಹಂಚಿಕೆಯಾಗಿರುವ BPL ಮತ್ತು APL ಪಡಿತರ ಚೀಟಿಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಇಲ್ಲಿಯವರೆಗೆ ಹಂಚಿಕೆಯಾಗಿರುವ ವಿವಿಧ ಪಡಿತರ ಚೀಟಿಗಳ ವಿವರ ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ ನೋಡಿ) |
| ಆ | ಇಲ್ಲಿಯವರೆಗೆ ಹೊಸದಾಗಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಹಾಗೂ ವಿತರಿಸಿದ ಪಡಿತರಗಳು ಎಷ್ಟು; | (ಕೆಳಗಿನ ಕೋಷ್ಟಕ ನೋಡಿ) |

ಅ:

| ಎ.ಪಿ.ಎಲ್ ಪಡಿತರ ಚೀಟಿ | ಬಿ.ಪಿ.ಎಲ್ ಪಡಿತರ ಚೀಟಿ | ಆದ್ಯತೇತರ ಪಡಿತರ ಚೀಟಿ |
|---|---|---|
| 10,93,702 | 1,16,67,540 | 20,79,787 |

ಆ:

| ಅರ್ಜಿ ವಿಧಾನ | ಸಲ್ಲಿಕೆಯಾದ ಅರ್ಜಿಗಳು | ವಿತರಿಸಿದ ಪಡಿತರ ಚೀಟಿಗಳು |
|---|---|---|
| ಆದ್ಯತಾ ಪಡಿತರ ಚೀಟಿ | 4,94,379 | 3,86,208 |
| ಆದ್ಯತೇತರ ಪಡಿತರ ಚೀಟಿ | 2,27,762 | 1,69,400 |

| | | |
|---|---|---|
| ಇ | ನ್ಯಾಯಬೆಲೆ ಅಂಗಡಿಗಳು ಸಮರ್ಪಕವಾಗಿ ದಿನಸಿ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಇದರ ಬಗ್ಗೆ ಕೈಗೊಂಡ ಕ್ರಮಗಳೇನು; | ಹೌದು,<br>ಸಾರ್ವಜನಿಕ ವಿತರಣಾ ಪದ್ಧತಿಯಲ್ಲಿ ಯಾವುದೇ ನ್ಯಾಯಬೆಲೆ ಅಂಗಡಿಗಳ ವಿತರಣೆಯಲ್ಲಿ ಯಾವುದಾದರು ಲೋಪ ಕಂಡುಬಂದಲ್ಲಿ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸಿ ನಿಯಾಮನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ | ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನೀಡುವ ದಿನಸಿ ವಸ್ತುಗಳನ್ನು ಹೊರತುಪಡಿಸಿ, ಬೇರೆ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು,<br>ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪೂರೈಕೆಯಲ್ಲಿರುವ ಅಕ್ಕಿ ಗೋಧಿ,ರಾಗಿ,ಇತ್ಯಾದಿ ಆಹಾರ ಧಾನ್ಯಗಳನ್ನು ಹೊರತುಪಡಿಸಿ ಬೇರೆ ವಸ್ತುಗಳನ್ನು ಮಾರಾಟ ಮಾಡಲು ಅವಕಾಶವಿರುತ್ತದೆ. |
| ಉ | ಇತರೆ ವಸ್ತುಗಳನ್ನು ಖರೀದಿ ಮಾಡಿದರೆ ಮಾತ್ರ ದಿನಸಿ ನೀಡಲಾಗುವುದು ಎಂದು ನ್ಯಾಯಬೆಲೆ ಅಂಗಡಿಯವರು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಯಾವುದೇ ನ್ಯಾಯಬೆಲೆ ಅಂಗಡಿಯವರು ಮಾರಾಟ ಮಾಡುವ ಬೇರೆ ವಸ್ತುಗಳನ್ನು ಖರಿದಿಸುವಂತೆ ಪಡಿತರ ಚೀಟಿದಾರರಿಗೆ ಒತ್ತಾಯ ಮಾಡುವಂತಿಲ್ಲ.<br>ನ್ಯೂನತೆ ಎಸಗಿದ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸಲಾಗುತ್ತದೆ. |

ಆನಾಸ 245 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.